ಪ್ರಸ್ತಾಪವಾಗಿದೆ. ಆಗ್ರೋ ಕೇಂದ್ರದ ಬಗ್ಗೆ ದಿಢೀರ್ ಎಂದು ಪ್ರಶ್ನೆ ಕೇಳಿದರೆ ನಾನು ಯಾವ ರೀತಿ ಉತ್ತರವನ್ನು ಹೇಳಲು ಸಾಧ್ಯವಾಗುತ್ತದೆ? ಒಟ್ಟಾರೆ ಹೋದ ವರ್ಷದಲ್ಲಿ ಎಷ್ಟು ಗೊಬ್ಬರ ಆಗ್ರೋ ಇಂಡಷ್ಟ್ರೀಸ್ ಮೂಲಕ ಮಾರಾಟವಾಗಿದೆ ಎನ್ನುವ ಬಗ್ಗೆ ಮಾಹಿತಿ ಕೊಟ್ಟಿದ್ದೇನೆ. ಈ ವರ್ಷದ ಅಂಕಿಅಂಶವನ್ನು ಕೊಟ್ಟಿದ್ದೇನೆ.

ಶ್ರೀ ಬಿ.ಎಸ್. ಯಡಿಯೂರಪ್ಪ:- ನಿಮ್ಮ ಉತ್ತರವನ್ನು ರಾಜ್ಯದ ಜನರು ಕೇಳುತ್ತಿರುತ್ತಾರೆ.

(ಗೊಂದಲ)

ಇದು ಬೇಜವಾಬ್ದಾರಿಯ ಪರಮಾವಧಿ, ನೀವು ಕೃಷಿ ಸಚಿವರಾಗಿ ಎಷ್ಟು ಆಗ್ರೋ ಕೇಂದ್ರದಿಂದ ಗೊಬ್ಬರ ವಿತರಣೆಯಾಗುತ್ತಿದೆ ಎಂಬ ಬಗ್ಗೆ ಉತ್ತರ ಹೇಳುವುದಿಲ್ಲವೆಂದರೆ ಹೇಗೆ? ನಿಮ್ಮ ಜವಾಬ್ದಾರಿಯಿಂದ ನೀವು ಸಂಪೂರ್ಣವಾಗಿ ತಪ್ಪಿಸಿಕೊಳ್ಳುತ್ತಿದ್ದೀರಿ ಎಂದು ಹೇಳಬೇಕಾಗುತ್ತದೆ.

ಶ್ರೀ ಸಿ. ಬೈರೇಗೌಡ: ಅದು ನಿಮ್ಮ ಅಭಿಪ್ರಾಯ. ಒಟ್ಟು 150 ಆಗ್ರೋ ಕೇಂದ್ರಗಳಿವೆ.

ಅಧ್ಯಕ್ಷರು: ಪ್ರಶ್ನೋತ್ತರ ಮುಕ್ತಾಯವಾಯಿತು. ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು, 8ನೇ ಪಟ್ಟಿ.

ಚುಕ್ಕೆ ಗುರುತಿನ ಪ್ರಶ್ನೆಗಳಿಗೆ ಲಿಖಿತ ಮೂಲಕ ನೀಡುವ ಉತ್ತರಗಳು

ಶ್ರೀ ಡಿ. ಮಂಜುನಾಥ (ಉನ್ನತ ಶಿಕ್ಷಣ ಸಚಿವರು):- ಸನ್ಮಾನ್ಯ ಅಧ್ಯಕ್ಷರೇ, 24ನೇ ಆಗಸ್ಟ 1995ರಂದು ಲಿಖಿತ ಮೂಲಕ ಉತ್ತರಿಸುವ 8ನೇ ಪಟ್ಟಿಯ 91ನೇ ಪ್ರಶ್ನೆಗಳ ಪೈಕಿ, 60 ಪ್ರಶ್ನೆಗಳ ಉತ್ತರಗಳನ್ನು ಸದನದ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು: ಮಂಡಿಸಲಾಯಿತು.

ದಾವಣಗೆರೆ ಸಾರಿಗೆ ವಿಭಾಗದಲ್ಲಿ ಬಸ್ಸುಗಳ ಕೊರತೆ.

892-ಶ್ರೀ ಹೆಚ್. ಶಿವಪ್ಪ (ಹರಿಹರ): ಮಾನ್ಯ ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವಿರೆ?

ಅ) ದಾವಣಗೆರೆ ಸಾರಿಗೆ ವಿಭಾಗದಲ್ಲಿ ಬಸ್ಸುಗಳ ಕೊರತೆ ಇರುವುದರಿಂದ ಹರಿಹರ ತಾಲ್ಲೂಕು ಗ್ರಾಮಾಂತರ ಪ್ರದೇಶಗಳಿಗೆ ಸಾರಿಗೆ ವ್ಯವಸ್ಥೆ ಕಲ್ಪಿಸಲು ತುಂಬಾ ತೊಂದರೆ ಆಗಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೆ?

ಆ) ಹಾಗಿದ್ದಲ್ಲಿ ಈ ಪ್ರದೇಶದಲ್ಲಿ ಕೂಡಲೇ ಹೆಚ್ಚಿನ ಬಸ್‌ಗಳನ್ನು ಒದಗಿಸಲು ಕ್ರಮ ಕೈಗೊಳ್ಳುವರೆ?

ಶ್ರೀ ಕೆ.ಎಸ್. ಬೀಳಗಿ (ಸಾರಿಗೆ ಸಚಿವರು):

ಅ) ಪ್ರಸ್ತುತ ದಾವಣಗೆರೆ ವಿಭಾಗದಲ್ಲಿ ವಾಹನಗಳ ಕೊರತೆ ಕಂಡುಬರುವುದಿಲ್ಲ, ಸಂಸ್ಥೆಯ ವತಿಯಿಂದ ಕಲ್ಪಿಸಲಾಗಿರುವ ಬಸ್ ಸೌಲಭ್ಯವು ಹರಿಹರ ತಾಲ್ಲೂಕಿನಲ್ಲಿಸ ಒತ್ತಡಕ್ಕನುಗುಣವಾಗಿರುತ್ತವೆ.

ಅ) ಹರಿಹರ ತಾಲ್ಲೂಕಿನಲ್ಲಿ ಹೆಚ್ಚಿನ ಬಸ್ ಸೌಲಭ್ಯದ ಅಗತ್ಯ ಕಂಡುಬಂದಲ್ಲಿ ಸೂಕ್ತ ಕ್ರಮ ತೆಗೆದುಕೊಳ್ಳಲಾಗುವುದು.

ಭದ್ರಾ ಸಹಕಾರ ಸಕ್ಕರೆ ಕಾರ್ಖಾನೆಯಲ್ಲಿ ನಡೆಯಿತೆನ್ನಲಾದ ಆರೋಪ

891 - ಶ್ರೀ ಹೆಚ್. ಶಿವಪ್ಪ (ಹರಿಹರ) : ಮಾನ್ಯ ಸಕ್ಕರೆ, ಜವಳಿ, ವಿಜ್ಞಾನ ಪರಿಸರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವಿರೆ?

ಅ) 1987-92ರ ಅವಧಿಯಲ್ಲಿ ಭದ್ರಾ ಸಹಕಾರಿ ಸಕ್ಕರೆ ಕಾರ್ಖಾನೆಯ ಕಾರ್ಯನಿರ್ವಾಹಕ ನಿರ್ದೇಶಕರು ಹಾಗೂ ವಿಶೇಷಾಧಿಕಾರಿಗಳು ಅವ್ಯವಹಾರ ನಡೆಸಿದರೆನ್ನಲಾದ ಆರೋಪ ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಇವರುಗಳ ಮೇಲೆ ಸರ್ಕಾರವು ಯಾವ ಕ್ರಮವನ್ನು ಕೈಗೊಂಡಿದೆ?

ಶ್ರೀ ಪಿ.ಸಿ. ಸಿದ್ದನಗೌಡರ್ (ಸಕ್ಕರೆ, ಜವಳಿ, ವಿಜ್ಞಾನ, ಯಂತ್ರಕಲೆ, ಪರಿಸರ ಹಾಗೂ ಜೀವಪರಿಸ್ಥಿತಿ ಶಾಸ್ತ್ರ ಸಚಿವರು)

ಅ) ಹೌದು

ಆ) ಅವ್ಯವಹಾರಗಳ ಆರೋಪಗಳ ಬಗ್ಗೆ ಕರ್ನಾಟಕ ಸಹಕಾರಿ ಸಂಘಗಳ ಕಾಯಿದೆ 1959ರ ಕಲಂ 64ರ ಅನ್ವಯ ವಿಚಾರಣೆಗೆ ಆದೇಶಿಸಿದ್ದು, ವರದಿ ನಿರೀಕ್ಷಿಸಲಾಗಿದೆ.

ಲೆಕ್ಕಪರಿಶೋಧನಾ ವರದಿಯ ಪ್ರಕಾರ ಸಹಕಾರ ಸಂಘಗಳ ಕಾಯಿದೆ 1959ರ ಕಲಂ 69ರ ರೀತ್ಯ ಸರ್‌ಚಾರ್ಜು ಅರ್ಜಿಗಳು ದಾಖಲಾಗಿದ್ದು ಅವು ವಿಚಾರಣೆ ಹಂತದಲ್ಲಿದೆ.

ಮಾಜಿ ವ್ಯವಸ್ಥಾಪಕ ನಿರ್ದೇಶಕರ ವಿರುದ್ಧ ಇಲಾಖಾ ವಿಚಾರಣೆ ನಡೆಸುವ ವಿಷಯ ಸರ್ಕಾರದ ಪರಿಶೀಲನೆಯಲ್ಲಿದೆ.

ರಾಜ್ಯದಲ್ಲಿ ಬರಗಾಲ ಪರಿಸ್ಥಿತಿಯ ಬಗ್ಗೆ

968 - ಶ್ರೀ ಗುರುಪಾದಪ್ಪ ನಾಗಮಾರಪಳ್ಳಿ (ಔರಾದ್) : ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದ ಯಾವ ಯಾವ ತಾಲ್ಲೂಕುಗಳಲ್ಲಿ ಮಳೆ ವಿಫಲವಾಗಿ ಬರಗಾಲ ಪರಿಸ್ಥಿತಿ ಉಂಟಾಗಿದೆ?

ಆ) ಪರಿಸ್ಥಿತಿಯನ್ನು ನಿಭಾಯಿಸಲು ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ?

ಇ) ಬರಗಾಲದ ಪರಿಸ್ಥಿತಿಗಾಗಿ ಕೇಂದ್ರ ಸರ್ಕಾರದಿಂದ ನೆರವನ್ನು ಕೇಳಲಾಗಿದೆಯೇ? ಕೇಳಿದ್ದಲ್ಲಿ ನೆರವಿನ ಮೊತ್ತವೆಷ್ಟು?

ಈ) ರಾಜ್ಯದ ಬರ ಪರಿಸ್ಥಿತಿಯನ್ನು ಪರಿಶೀಲಿಸಲು ಕೇಂದ್ರ ಸರ್ಕಾರದ ಅಧಿಕಾರಿಗಳ ತಂಡ ರಾಜ್ಯಕ್ಕೆ ಭೇಟಿ ನೀಡಿತ್ತೇ?